**Akashvani : Bangalore**
**National Bulletin In Kannada**
**15.04.2024 / 13.30 hrs**

**ಆಕಾಶವಾಣಿ, ಬೆಂಗಳೂರು**

**ರಾಷ್ಟ್ರೀಯ ವಾರ್ತೆಗಳು**

**15.04.2024 / 13.30 hrs**

<><*<><>*><>

## ಮುಖ್ಯಾಂಶಗಳು

೧. ಸಾರ್ವತ್ರಿಕ ಚುನಾವಣೆ : ವಿವಿಧ ರಾಜ್ಯಗಳಲ್ಲಿ ಅಭ್ಯರ್ಥಿಗಳ ಪರ ಪ್ರಚಾರ ಚುರುಕು

೨. ಕೇರಳದಲ್ಲಿ ಹಿರಿಯ ಬಿಜೆಪಿ ನಾಯಕ ಹಾಗೂ ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಾರ್ವಜನಿಕ ಸಭೆಗಳಲ್ಲಿ ಭಾಗಿ

೩. ಅಮರನಾಥ್ ಯಾತ್ರೆಗೆ ನೋಂದಾಯಿಸಿಕೊಳ್ಳಲು ಇಂದಿನಿಂದ ಅವಕಾಶ

೪. ಐಪಿಎಲ್ ಟಿ-೨೦ ಕ್ರಿಕೆಟ್ : ರಾಯಲ್ ಚಾಲೆಂಜರ್ಸ್ ಬೆಂಗಳೂರು-ಸನ್‌ರೈಸರ್ಸ್ ಹೈದರಾಬಾದ್ ನಡುವೆ ಹಣಾಹಣಿ

<><*<><>*><>

ಲೋಕಸಭಾ ಚುನಾವಣೆ ಹಿನ್ನೆಲೆ ಕೇರಳದಲ್ಲಿಂದು ರಾಜಕೀಯ ಪಕ್ಷಗಳ ಪ್ರಚಾರ ಕಾರ್ಯಗಳು ಚುರುಕುಗೊಂಡಿದ್ದು, ಬಿಜೆಪಿಯ ಹಿರಿಯ ನಾಯಕ ಮತ್ತು ಪ್ರಧಾನಿ ನರೇಂದ್ರ ಮೋದಿ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಇಂದು ಚುನಾವಣಾ ಪ್ರಚಾರದಲ್ಲಿ ಭಾಗವಹಿಸಲಿದ್ದಾರೆ. ಕುನ್ನಂಕುಲಂ ಬಳಿ ಬೆಳಿಗ್ಗೆ ನಡೆದ ಸಾರ್ವಜನಿಕ ಸಭೆಯಲ್ಲಿ ಪ್ರಧಾನಿ ನರೇಂದ್ರ ಮೋದಿ ಭಾಗವಹಿಸಿ ಅಲತ್ತೂರ್ ಮೀಸಲು ಕ್ಷೇತ್ರದ ಎನ್‌ಡಿಎ ಅಭ್ಯರ್ಥಿಪರ ಪ್ರಚಾರ ಕೈಗೊಂಡರು. ಬಳಿಕ ಅವರು, ತಿರುವನಂತಪುರದ ಅಟ್ಟಿಂಗಲ್‌ಗೆ ತೆರಳಲಿದ್ದು, ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಲಿದ್ದಾರೆ. ನಂತರ ತಮಿಳುನಾಡಿನ ತಿರುನೆಲ್ವೇಲಿಯಲ್ಲಿ ಮತ್ತೊಂದು ಸಾರ್ವಜನಿಕ ಸಭೆಯಲ್ಲಿ ಭಾಗವಹಿಸಲಿದ್ದಾರೆ. ಏತನ್ಮಧ್ಯೆ, ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಸಂಜೆ ಕೋಝಿಕೋಡ್‌ನಲ್ಲಿ ಸಾರ್ವಜನಿಕ ರ‍್ಯಾಲಿ ಉದ್ದೇಶಿಸಿ ಮಾತನಾಡಲಿದ್ದು, ಇಂದು ಮತ್ತು ನಾಳೆ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ರಾಜಸ್ಥಾನದಲ್ಲಿ ಕಾಂಗ್ರೆಸ್, ಬಿಜೆಪಿ ಮತ್ತು ಇತರ ಪಕ್ಷಗಳು ಮೊದಲ ಹಂತದ ಚುನಾವಣೆಗಾಗಿ ಭರದಿಂದ ಪ್ರಚಾರ ನಡೆಸಿವೆ. ಬಿಜೆಪಿ ಹಿರಿಯ ನಾಯಕ ಹಾಗೂ ಕೇಂದ್ರ ಸಚಿವ ಅಮಿತ್ ಶಾ ಇಂದು

ಜೈಪುರದಲ್ಲಿ ರೋಡ್ ಶೋ ನಡೆಸಲಿದ್ದಾರೆ. ಈ ರೋಡ್‌ಶೋ ಸಂಗನೇರಿ ಗೇಟ್‌ನಿಂದ ಛೋಟಿ ಚೋಪರ್‌ವರೆಗೆ ನಡೆಯಲಿದೆ. ಇನ್ನು ಹಲವು ಹಿರಿಯ ಬಿಜೆಪಿ ಮತ್ತು ಕಾಂಗ್ರೆಸ್ ನಾಯಕರು ಕೂಡ ತಮ್ಮ ಪಕ್ಷಗಳ ಪರ ಪ್ರಚಾರ ನಡೆಸಲಿದ್ದಾರೆ. ರಾಜಸ್ಥಾನ ಉಪಮುಖ್ಯಮಂತ್ರಿ ದಿಯಾ ಕುಮಾರಿ ನಾಗೌರ್‌ನಲ್ಲಿ, ಕ್ಯಾಬಿನೆಟ್ ಸಚಿವ ಡಾ. ಕಿರೋರಿ ಲಾಲ್ ಮೀನಾ ದೌಸಾ ಮತ್ತು ಮದನ್ ದಿಲಾವರ್ ಕೋಟಾದಲ್ಲಿ ಸಾರ್ವಜನಿಕ ಸಭೆಗಳನ್ನು ನಡೆಸಲಿದ್ದಾರೆ. ಕಾಂಗ್ರೆಸ್ ಪರವಾಗಿ ರಾಜ್ಯಾಧ್ಯಕ್ಷ ಗೋವಿಂದ್ ದೋಟಾಸರಾ ಇಂದು ಸಿಕಾರ್ ಜಿಲ್ಲೆಯಲ್ಲಿ ಪ್ರಚಾರ ನಡೆಸಲಿದ್ದಾರೆ. ಮಾಜಿ ಮುಖ್ಯಮಂತ್ರಿ ಅಶೋಕ್ ಗೆಹ್ಲೋಟ್ ಮತ್ತು ಮಾಜಿ ಉಪಮುಖ್ಯಮಂತ್ರಿ ಸಚಿನ್ ಪೈಲಟ್ ಕೂಡ ವಿವಿಧ ಸ್ಥಳಗಳಲ್ಲಿ ಚುನಾವಣಾ ಪ್ರಚಾರದಲ್ಲಿ ಭಾಗವಹಿಸಲಿದ್ದಾರೆ.

<><*<><>*><>

ಬಿಜೆಪಿ ನಾಯಕ ಹಾಗೂ ಕೇಂದ್ರ ಸಚಿವ ಅಮಿತ್ ಶಾ ಇಂಫಾಲದಲ್ಲಿಂದು ಪಕ್ಷದ ಅಭ್ಯರ್ಥಿ ಪರ ಪ್ರಚಾರ ನಡೆಸಲಿದ್ದಾರೆ. ಮಣಿಪುರಕ್ಕೆ ತಮ್ಮ ಒಂದು ದಿನದ ಭೇಟಿಗಾಗಿ ಇಂದು ಮಧ್ಯಾಹ್ನ ತ್ರಿಪುರಾದಿಂದ ಇಂಫಾಲ್‌ಗೆ ಆಗಮಿಸಲಿದ್ದಾರೆ. ಬಳಿಕ ಸಾರ್ವಜನಿಕ ಸಭೆಯಲ್ಲಿ ಮಣಿಪುರ ಮುಖ್ಯಮಂತ್ರಿ ಎನ್. ಬಿರೇನ್ ಸಿಂಗ್, ಬಿಜೆಪಿ ಮಣಿಪುರ ರಾಜ್ಯಾಧ್ಯಕ್ಷ ಮತ್ತು ಪಕ್ಷದ ಇತರ ನಾಯಕರು ಭಾಗವಹಿಸಲಿದ್ದಾರೆ. ಕಾಂಗ್ರೆಸ್ ಮತ್ತು ಮೈತ್ರಿ ಪಕ್ಷಗಳು ಮಣಿಪುರದ ಕಾಂಗ್ರೆಸ್ ಅಭ್ಯರ್ಥಿಯ ಪರ ಈಗಾಗಲೇ ಪ್ರಚಾರ ನಡೆಸುತ್ತಿವೆ. ಕಾಂಗ್ರೆಸ್ ಪಕ್ಷ ನಿನ್ನೆ ರಾಜ್ಯದಲ್ಲಿ ನಾಲ್ಕು ಸಾರ್ವಜನಿಕ ರ್‍ಯಾಲಿಗಳನ್ನು ನಡೆಸಿ, ಅಲ್ಲಿ ನಡೆಯುತ್ತಿರುವ ಜನಾಂಗೀಯ ಬಿಕ್ಕಟ್ಟಿಗೆ ಕಾಂಗ್ರೆಸ್ ಪರಿಹಾರವನ್ನು ತರಲಿದೆ ಎಂದು ಘೋಷಿಸಿದೆ.

<><*<><>*><>

೧೮ನೇ ಲೋಕಸಭೆಯ ಮೊದಲ ಹಂತದ ಚುನಾವಣೆಗೂ ಮುನ್ನವೇ ದೇಶಾದ್ಯಂತ ಚುನಾವಣಾ ಆಯೋಗ ಒಟ್ಟು ೪ ಸಾವಿರದ ೬೫೦ ಕೋಟಿ ರೂಪಾಯಿ ಮೊತ್ತದ ನಗದು ಮತ್ತಿತರ ವಸ್ತುಗಳನ್ನು ವಶಪಡಿಸಿಕೊಂಡಿದೆ. ಇದು ದೇಶದ ೭೫ ವರ್ಷಗಳ ಚುನಾವಣಾ ಇತಿಹಾಸದಲ್ಲೇ ಅತ್ಯಂತ ಹೆಚ್ಚಿನದಾಗಿದೆ ಎಂದು ಚುನಾವಣಾ ಆಯೋಗ ಮಾಹಿತಿ ನೀಡಿದೆ. ಕರ್ನಾಟಕದಲ್ಲಿ ಏಪ್ರಿಲ್ ೧೩ ರವರೆಗೆ ೩೫ ಕೋಟಿ ೫೩ ಲಕ್ಷದ ೮೦ ಸಾವಿರದ ೭೦ ರೂಪಾಯಿ ನಗದು, ೧೮ ಕೋಟಿ ೭೫ ಲಕ್ಷಕ್ಕೂ ಹೆಚ್ಚು ಮೌಲ್ಯದ ಮಾದಕ ವಸ್ತು, ೬೦ ಕೋಟಿ ೮೬ ಲಕ್ಷ ಮೌಲ್ಯದ ಉಚಿತ ಕೊಡುಗೆಗಳು ಸೇರಿದಂತೆ ಒಟ್ಟಾರೆ ೨೮೧ ಕೋಟಿ ೪೩ ಲಕ್ಷ ರೂಪಾಯಿ ಮೌಲ್ಯದ ನಗದು ಹಾಗೂ ಮತ್ತಿತರ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದು ಆಯೋಗ ತಿಳಿಸಿದೆ.

<><*<><>*><>

೩ ಸಾವಿರದ ೮೮೦ ಮೀಟರ್ ಎತ್ತರದಲ್ಲಿರುವ ಪವಿತ್ರ ಅಮರನಾಥ  ಗುಹಾ ದೇಗುಲದ ವಾರ್ಷಿಕ ಯಾತ್ರೆ ಜೂನ್ ೨೯ ರಿಂದ ಆಗಸ್ಟ್ ೧೯ ವರೆಗೆ ನಡೆಯಲಿದೆ. ೫೨ ದಿನಗಳ ಈ ಯಾತ್ರೆಗೆ ನೋಂದಾಯಿಸಿಕೊಳ್ಳಲು ಇಂದಿನಿಂದ ಅವಕಾಶ ಕಲ್ಪಿಸಲಾಗಿದೆ ಎಂದು ಅಮರನಾಥ ದೇಗುಲ ಮಂಡಳಿ ಪ್ರಕಟಿಸಿದೆ. ಅನಂತನಾಗ್ ಜಿಲ್ಲೆಯ ಸಾಂಪ್ರದಾಯಿಕ ೪೮ ಕಿಲೋಮೀಟರ್ ಉದ್ದದ ನುನ್ವಾನ್-ಪಹಲ್ಗಾಮ್ ಮಾರ್ಗ ಅಥವಾ ಗಂಡರ್ಬಾಲ್ ಜಿಲ್ಲೆಯ ೧೪ ಕಿಲೋಮಿಟರ್ ನ ಚಿಕ್ಕದಾದ ಕಡಿದಾದ ಬಾಲ್ಟಾಲ್ ಮಾರ್ಗಗಳಲ್ಲಿ ಈ ಯಾತ್ರೆಯನ್ನು ಕೈಗೊಳ್ಳಬಹುದಾಗಿದೆ. ಭಕ್ತರು ಅಮರನಾಥ ಯಾತ್ರೆಯ ನೋಂದಣಿ ಮತ್ತು ವೈದ್ಯಕೀಯ ಅರ್ಜಿಯನ್ನು ಆನ್‌ಲೈನ್ ಮೂಲಕ ಅಮರನಾಥ ಯಾತ್ರೆಯ ಅಧಿಕೃತ ವೆಬ್‌ಸೈಟ್‌ನಲ್ಲಿ ಸಲ್ಲಿಸಬಹುದಾಗಿದೆ.

<><*<><>*><>

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರಿಂದು ನಾಗ್ಪುರದ ನ್ಯಾಷನಲ್ ಅಕಾಡೆಮಿ ಆಫ್ ಡೈರೆಕ್ಟ್ ಟ್ಯಾಕ್ಸ್‌ನಲ್ಲಿ ಭಾರತೀಯ ಕಂದಾಯ ಸೇವೆ - ಐಆರ್‌ಎಸ್‌ನ ೭೬ ನೇ ಬ್ಯಾಚ್‌ನ ಸಮಾರೋಪ ಸಮಾರಂಭವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಭಾರತೀಯ ಕಂದಾಯ ಸೇವೆಯ ೭೬ನೇಯ ಈ ಬ್ಯಾಚ್,  ೫೬ ಐಆರ್‌ಎಸ್ ಅಧಿಕಾರಿಗಳು ಮತ್ತು ರಾಯಲ್ ಭೂತಾನ್ ಸೇವೆಯ ಇಬ್ಬರು ಅಧಿಕಾರಿಗಳನ್ನು ಒಳಗೊಂಡಿದೆ. ನ್ಯಾಷನಲ್ ಅಕಾಡೆಮಿ ಆಫ್ ಡೈರೆಕ್ಟ್ ಟ್ಯಾಕ್ಸ್, ನಾಗ್ಪುರವು ಭಾರತ ಸರ್ಕಾರದ ಆದಾಯ ತೆರಿಗೆ ಇಲಾಖೆಯಲ್ಲಿ ಭಾರತೀಯ ಕಂದಾಯ ಸೇವಾ ಅಧಿಕಾರಿಗಳಿಗೆ ಅತ್ಯುನ್ನತ ತರಬೇತಿ ನೀಡುವ ಸಂಸ್ಥೆಯಾಗಿದೆ. ಐಆರ್‌ಎಸ್ ಅಧಿಕಾರಿಗಳನ್ನು ಯುಪಿಎಸ್‌ಸಿ ನಡೆಸುವ ಸಿವಿಲ್ ಸರ್ವೀಸಸ್ ಎಕ್ಸಾಮಿನೇಷನ್ ಮೂಲಕ ನೇಮಕ ಮಾಡಿಕೊಳ್ಳಲಾಗುತ್ತದೆ.

<><*<><>*><>

ಮದ್ಯ ನೀತಿ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ-ಇಡಿ ತನ್ನನ್ನು ಬಂಧಿಸಿರುವುದನ್ನು ಪ್ರಶ್ನಿಸಿ ದೆಹಲಿ ಮುಖ್ಯಮಂತ್ರಿ ಮತ್ತು ಎಎಪಿ ನಾಯಕ ಅರವಿಂದ್ ಕೇಜ್ರಿವಾಲ್ ಸಲ್ಲಿಸಿರುವ ಅರ್ಜಿಯನ್ನು ಸುಪ್ರೀಂ ಕೋರ್ಟ್ ಇಂದು ವಿಚಾರಣೆ ನಡೆಸಲಿದೆ. ನ್ಯಾಯಮೂರ್ತಿಗಳಾದ ಸಂಜೀವ್ ಖನ್ನಾ ಮತ್ತು ದೀಪಂಕರ್ ದತ್ತಾ ಅವರ ಪೀಠವು ಪ್ರಕರಣದ ವಿಚಾರಣೆ ನಡೆಸಲಿದೆ. ಈ ತಿಂಗಳ ೯ ರಂದು ದೆಹಲಿ ಹೈಕೋರ್ಟ್ ಅವರ ಅರ್ಜಿ ತಿರಸ್ಕರಿಸಿತ್ತು. ಏತನ್ಮಧ್ಯೆ ಅಬಕಾರಿ ತೆರಿಗೆ ಪ್ರಕರಣದಲ್ಲಿ ಬಂಧಿತರಾಗಿರುವ ಬಿಆರ್‌ಎಸ್ ಪಕ್ಷದ ನಾಯಕಿ ಕೆ. ಕವಿತಾ ಅವರ ನ್ಯಾಯಾಂಗ ಬಂಧನವನ್ನು ಇದೇ ೨೩ರವರೆಗೆ ಮುಂದೂಡಿ ದೆಹಲಿ ನ್ಯಾಯಾಲಯ ಆದೇಶ ಹೊರಡಿಸಿದೆ. ಅವರ ಮೂರು ದಿನಗಳ ಪೊಲೀಸ್ ವಿಚಾರಣಾ ಅವಧಿ ಮುಕ್ತಾಯಗೊಂಡ ಹಿನ್ನೆಲೆ ಅವರನ್ನು ಸಿಬಿಐ ಇಂದು ನ್ಯಾಯಾಲಯದ ಎದುರು ಹಾಜರುಪಡಿಸಿತು.

<><*<><>*><>

ಭಾರತೀಯ ಸೇನಾ ಮುಖ್ಯಸ್ಥ ಜನರಲ್ ಮನೋಜ್ ಪಾಂಡೆ ಇಂದಿನಿಂದ ನಾಲ್ಕು ದಿನಗಳ ಕಾಲ ಉಜ್ಬೇಕಿಸ್ತಾನ್ ಪ್ರವಾಸ ಕೈಗೊಂಡಿದ್ದಾರೆ. ಈ ಭೇಟಿಯು ಉಭಯ ರಾಷ್ಟ್ರಗಳ ನಡುವೆ ಪರಸ್ಪರ ತಿಳುವಳಿಕೆ ಮತ್ತು ದ್ವಿಪಕ್ಷೀಯ ರಕ್ಷಣಾ ಸಹಕಾರವನ್ನು ಬಲಪಡಿಸುವ ಗುರಿಯನ್ನು ಹೊಂದಿದೆ ಎಂದು ರಕ್ಷಣಾ ಸಚಿವಾಲಯ ತಿಳಿಸಿದೆ. ಭೇಟಿಯ ವೇಳೆ ಅವರು ಉಜ್ಬೇಕಿಸ್ತಾನದ ಉನ್ನತ ರಕ್ಷಣಾ ನಾಯಕರೊಂದಿಗೆ ಸಂವಾದ ನಡೆಸಲಿದ್ದಾರೆ. ಈ ಭೇಟಿ ಭಾರತ ಮತ್ತು ಉಜ್ಬೇಕಿಸ್ತಾನ್ ನಡುವಿನ ಮಿಲಿಟರಿ ಸಹಕಾರವನ್ನು ಸದೃಢಗೊಳಿಸುವ ಗುರಿ ಹೊಂದಿದೆ ಎಂದು ಸಚಿವಾಲಯ ತಿಳಿಸಿದೆ.

<><*<><>*><>

ಹವಾಮಾನ ಬದಲಾವಣೆಯನ್ನು ಎದುರಿಸಲು ಮತ್ತು ಹೆಚ್ಚು ಸಾಲ ಪಡೆದಿರುವ ರಾಷ್ಟ್ರಗಳಿಗೆ ಸಹಾಯ ಮಾಡುವ ನಿಟ್ಟಿನಲ್ಲಿ ಅಂತಾರಾಷ್ಟ್ರೀಯ ಹಣಕಾಸು ನಿಧಿ ಮತ್ತು ವಿಶ್ವಬ್ಯಾಂಕ್ ನ ವಸಂತ ಸಭೆಗಳು ಇದೇ ೧೭ರಂದು ಅಮೇರಿಕಾದ ವಾಷಿಂಗ್ಟನ್‌ನಲ್ಲಿ ಪ್ರಾರಂಭವಾಗಲಿವೆ.  ಈ ಸಭೆಗಳಲ್ಲಿ ಹಣಕಾಸು ಮತ್ತು ಅಭಿವೃದ್ಧಿ ಸಚಿವರು, ಶಿಕ್ಷಣ ತಜ್ಞರು ಮತ್ತು ಖಾಸಗಿ ವಲಯ ಮತ್ತು ನಾಗರಿಕ ಸಮಾಜದ ಪ್ರತಿನಿಧಿಗಳು ಜಾಗತಿಕ ಆರ್ಥಿಕತೆಯ ಸ್ಥಿತಿಯನ್ನು ಚರ್ಚಿಸಲು ಪಾಲ್ಗೊಳ್ಳಲಿದ್ದಾರೆ. ಈ ವರ್ಷ, ಅಂತಾರಾಷ್ಟ್ರೀಯ ಹಣಕಾಸು ನಿಧಿ ಮತ್ತು ವಿಶ್ವಬ್ಯಾಂಕ್ ಎರಡೂ ಸಂಸ್ಥೆಗಳು ೮೦ ನೇ ವಾರ್ಷಿಕೋತ್ಸವವನ್ನು ಆಚರಿಸಲಿವೆ. ಇತ್ತೀಚೆಗೆ ನಡೆದ ಪತ್ರಿಕಾಗೋಷ್ಠಿಯಲ್ಲಿ ವಿಶ್ವಬ್ಯಾಂಕ್ ಮುಖ್ಯಸ್ಥ ಅಜಯ್ ಬಂಗಾ, ವಿಶ್ವಾದ್ಯಂತ ಹವಾಮಾನ ಬಿಕ್ಕಟ್ಟು, ಸಾಲ, ಆಹಾರ ಅಭದ್ರತೆ, ಸಾಂಕ್ರಾಮಿಕ ರೋಗಗಳು ಇದ್ದು, ಶುದ್ಧ ಗಾಳಿ, ನೀರು ಮತ್ತು ಶಕ್ತಿಯ ಲಭ್ಯತೆಯ ಅವಶ್ಯಕತೆಯಿದೆ ಎಂದು ಅವರು ಹೇಳಿದರು.

<><*<><>*><>

ಅಫ್ಘಾನಿಸ್ತಾನದಲ್ಲಿ ಮೂರು ದಿನಗಳ ಕಾಲ ಭಾರೀ ಮಳೆ ಮತ್ತು ಪ್ರವಾಹ ಪರಿಸ್ಥಿತಿಯಿಂದಾಗಿ ಕನಿಷ್ಠ ೩೩ ಜನರು ಸಾವನ್ನಪ್ಪಿದ್ದು, ೨೭ ಜನರು ಗಾಯಗೊಂಡಿದ್ದಾರೆ. ಈ ಕುರಿತು ನಿನ್ನೆ ಮಾಹಿತಿ ನೀಡಿದ ವಿಪತ್ತು ನಿರ್ವಹಣಾ ಇಲಾಖೆಯ ವಕ್ತಾರರು, ಮಳೆ ಮತ್ತು ಹಠಾತ್ ಪ್ರವಾಹದಿಂದ ಹೆಚ್ಚಿನ ಜೀವಹಾನಿ ಮತ್ತು ಆರ್ಥಿಕ ನಷ್ಟ ಉಂಟಾಗಿದೆ. ಹೆಚ್ಚಿನ ಸಾವುನೋವುಗಳು ಮನೆಯ ಮೇಲ್ಛಾವಣಿ ಕುಸಿತದಿಂದ ಸಂಭವಿಸಿವೆ ಎಂದರು. ಸುಮಾರು ೬೦೦ ಮನೆಗಳು, ೬೦೦ ಕಿಲೋಮೀಟರ್ ಉದ್ದದಷ್ಟು ರಸ್ತೆಗಳು ಹಾನಿಗೊಳಗಾಗಿದ್ದು, ಸುಮಾರು ೨ ಸಾವಿರ ಎಕರೆ ಕೃಷಿಭೂಮಿ ಪ್ರವಾಹಕ್ಕೆ ಕೊಚ್ಚಿಹೋಗಿದೆ. ದೇಶದ ೩೪ ಪ್ರಾಂತ್ಯಗಳ ಪೈಕಿ ಸುಮಾರು ೨೦ ಪ್ರಾಂತ್ಯಗಳು ಭಾರೀ ಮಳೆಗೆ ಸಿಲುಕಿವೆ ಎಂದು ವಕ್ತಾರರು ತಿಳಿಸಿದರು.

<><*<><>*><>

ವಾಯುವ್ಯ ಭಾರತದಲ್ಲಿ ಮುಂದಿನ ೨೪ ಗಂಟೆಗಳ ಕಾಲ ಸಾಧಾರಣ ಗುಡುಗು, ಮಿಂಚು, ಬಿರುಗಾಳಿ ಸಹಿತ ಆಲಿಕಲ್ಲು ಮಳೆ ಮುಂದುವರೆಯಲಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಇಂದು ಜಮ್ಮು-ಕಾಶ್ಮೀರ, ಲಡಾಖ್, ಗಿಲ್ಗಿಟ್, ಬಾಲ್ಟಿಸ್ತಾನ್, ಮುಜಫರಾಬಾದ್, ಹಿಮಾಚಲ ಪ್ರದೇಶ ಮತ್ತು ಉತ್ತರಾಖಂಡದಲ್ಲಿ ಸಾಧಾರಣ ಗುಡುಗು, ಮಿಂಚು ಮತ್ತು ಗಂಟೆಗೆ ೪೦ ಕಿಲೋಮೀಟರ್ ವೇಗದಲ್ಲಿ ಗಾಳಿ ಸಹಿತ ಸಾಧಾರಣ ಮಳೆಯಾಗುವ ನಿರೀಕ್ಷೆಯಿದೆ ಎಂದು ಇಲಾಖೆ ತಿಳಿಸಿದೆ. ಪಶ್ಚಿಮ ಉತ್ತರ ಪ್ರದೇಶ, ಪಂಜಾಬ್, ಹರಿಯಾಣ, ಚಂಡೀಗಢ, ದೆಹಲಿ, ರಾಜಸ್ಥಾನ ಮತ್ತು ಮಧ್ಯಪ್ರದೇಶದಲ್ಲಿ ಇಂದು ಚದುರಿದಂತೆ ವ್ಯಾಪಕ ಮಳೆಯಾಗುವ ನಿರೀಕ್ಷೆಯಿದೆ. ಇಂದು ದೆಹಲಿಯಲ್ಲಿ ಮೋಡ ಕವಿದ ವಾತಾವರಣವಿದ್ದು, ಲಘು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

<><*<><>*><>

ಸುಪ್ರೀಂಕೋರ್ಟ್ ಸೇರಿದಂತೆ ಹೈಕೋರ್ಟ್‌ನ ೨೧ ನಿವೃತ್ತ ನ್ಯಾಯಮೂರ್ತಿಗಳು, ನ್ಯಾಯಾಂಗ ವ್ಯವಸ್ಥೆಯನ್ನು ದುರ್ಬಲಗೊಳಿಸುತ್ತಿರುವ ಬಣಗಳ ಬಗ್ಗೆ ಕಳವಳ ವ್ಯಕ್ತಪಡಿಸುತ್ತಾ ಸುಪ್ರೀಂಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ. ಡಿ.ವೈ. ಚಂದ್ರಚೂಡ್ ಅವರಿಗೆ ಪತ್ರ ಬರೆದಿದ್ದಾರೆ. ಒತ್ತಡ, ತಪ್ಪು ಮಾಹಿತಿ ಮತ್ತು ಸಾರ್ವಜನಿಕ ಅವಹೇಳನದ ಮೂಲಕ ನ್ಯಾಯಾಂಗ ವ್ಯವಸ್ಥೆವನ್ನು ದುರ್ಬಲಗೊಳಿಸಲು ಕೆಲವು ಬಣಗಳ ಪ್ರಯತ್ನ ಉಲ್ಬಣವಾಗುತ್ತಿರುವ ಬಗ್ಗೆ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ನ್ಯಾಯಾಂಗ ವ್ಯವಸ್ಥೆಯನ್ನು ಇಂತಹ ಒತ್ತಡಗಳ ವಿರುದ್ಧ ಗಟ್ಟಿಗೊಳಿಸಬೇಕು ಮತ್ತು ದೇಶದ ಕಾನೂನು ವ್ಯವಸ್ಥೆಯ ಪಾವಿತ್ರ್ಯತೆ ಮತ್ತು ಸ್ವಾಯತ್ತತೆ ಕಾಪಾಡುವುದನ್ನು ಖಚಿತಪಡಿಸಿಕೊಳ್ಳಬೇಕು ಎಂದು ನಿವೃತ್ತ ನ್ಯಾಯಮೂರ್ತಿಗಳು ಒತ್ತಾಯಿಸಿದ್ದಾರೆ.

<><*<><>*><>

ಬೆಂಗಳೂರಿನ ಎಂ. ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಹಾಗೂ ಸನ್ ರೈಸರ್ಸ್ ಹೈದರಾಬಾದ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಸಂಜೆ ೭.೩೦ ಕ್ಕೆ ಪ್ರಾರಂಭವಾಗಲಿದೆ. ನಿನ್ನೆ ನಡೆದ ಮುಂಬೈನ ವಾಂಖೆಡೆ ಕ್ರೀಡಾಂಗಣದಲ್ಲಿ ಚನ್ನೈ ಸೂಪರ್ ಕಿಂಗ್ಸ್ ತಂಡ, ಮುಂಬೈ ಇಂಡಿಯನ್ಸ್ ತಂಡದ ವಿರುದ್ಧ ೨೦ ರನ್ ಗಳಿಂದ ಗೆಲುವು ಸಾಧಿಸಿತು.

<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <>*><>

<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ಣ ೧.೫೦ ಕ್ಕೆ <>*><>